**ಕರ್ನಾಟಕ ಸರ್ಕಾರ**

ಕ್ರಮಾಂಕ : ಡಿಪಿಎಆರ್ 7 ಕೆಒಎಲ್ 93

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ : 5-2-1993.

**ಸುತ್ತೋಲೆ**

ವಿಷಯ :- ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸಲು ಜವಾಬ್ದಾರರನ್ನಾಗಿ ಮಾಡಿರುವ ಅಧಿಕಾರಿಗಳ ಕಛೇರಿಗಳಲ್ಲಿ ತನಿಖಾ ತಂಡವನ್ನು ರಚಿಸುವ ಬಗ್ಗೆ.

ಉಲ್ಲೇಖ :- 1) ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 183 ಕೆಒಎಲ್ 92, ದಿನಾಂಕ : 11-11-92.

2) ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಟಿಪ್ಪಣಿ ಸಂಖ್ಯೆ : ಕಅಪ್ರಾ : ಅ : 357 : 92-93, ದಿನಾಂಕ 4-1-1993

ಉಲ್ಲೇಖ (1) ರಲ್ಲಿನ ಸರ್ಕಾರಿ ಆದೇಶದಲ್ಲಿ ''ರಾಜ್ಯ ಮಟ್ಟದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಭಾಗಮಟ್ಟದಲ್ಲಿ ವಿಭಾಗಾಧಿಕಾರಿಗಳು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ, ಉಪವಿಭಾಗ ಮಟ್ಟದಲ್ಲಿ ಉಪ ವಿಭಾಗಾಧಿಕಾರಿ ಮತ್ತು ತಾಲ್ಲೂಕು ಮಟ್ಟದಲ್ಲಿ ತಹಶಿಲ್ದಾರ್‌ರವರನ್ನು ಪ್ರಾಧಿಕಾರದ ಉದ್ದೇಶಗಳನ್ನು ನೆರವೇರಿಸಲು ಜವಾಬ್ದಾರರನ್ನಾಗಿ ಮಾಡಿದೆ'' ಇದೇ ಆದೇಶದ ಪ್ಯಾರಾ 7 ರಲ್ಲಿ ಪ್ರಾಧಿಕಾರದ ಪ್ರಕಾರ್ಯಗಳನ್ನು ಗೊತ್ತುಪಡಿಸಿದೆ.

2) ಆಡಳಿತದ ಎಲ್ಲ ಹಂತಗಳಲ್ಲಿ ಕನ್ನಡ ಬಳಕೆ ಪ್ರಗತಿ ತಿಳಿಯಲು, ತಪಾಸಣೆ ಮಾಡಲು ಜವಾಬ್ದಾರಿ ಕಛೇರಿಗಳಲ್ಲಿ ತನಿಖಾ ತಂಡ ರಚಿಸಿ, ಅವರುಗಳ ಹೆಸರುಗಳನ್ನು ಪ್ರಾಧಿಕಾರಕ್ಕೆ ತಿಳಿಸುವಂತೆ ಹಾಗೂ ತನಿಖಾ ವರದಿಗಳನ್ನು ನೇರವಾಗಿ ಪ್ರಾಧಿಕಾರಕ್ಕೆ ಕಳುಹಿಸುವಂತೆ ಸೂಚನೆ ನೀಡಿ ಆದೇಶ ಹೊರಡಿಸಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಉಲ್ಲೇಖ (2) ರಲ್ಲಿನ ಟಿಪ್ಪಣಿಯಲ್ಲಿ ತಿಳಿಸಿದ್ದಾರೆ.

3) ಆದ್ದರಿಂದ, ಸರ್ಕಾರವು ಕೆಳಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಆದೇಶಿಸಿದೆ.

ಅ) - ಸಚಿವಾಲಯದ ಪ್ರತಿ ಇಲಾಖೆಗಳಲ್ಲಿ ಅಧೀನ ಕಾರ್ಯದರ್ಶಿ, ಶಾಖಾಧಿಕಾರಿ ಮತ್ತು ಒಬ್ಬರು ಸಹಾಯಕರು ;

- ಇಲಾಖಾ ಮುಖ್ಯಸ್ಥರ ಕಛೇರಿ, ವಿಭಾಗ ಮಟ್ಟದ ಮತ್ತು ಜಿಲ್ಲಾ ಮಟ್ಟದ ಕಛೇರಿಗಳಲ್ಲಿ ಗ್ರೂಪ್ 'ಎ' ಅಥವಾ 'ಬಿ' ಗುಂಪಿನ ಅಧಿಕಾರಿಯೊಬ್ಬರು ಮತ್ತು ಇಬ್ಬರು ಸಹಾಯಕರು

- ಉಪ ವಿಭಾಗ ಮತ್ತು ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಗ್ರೂಪ್ ''ಬಿ'' ಮತ್ತು ಇಬ್ಬರು ಸಹಾಯಕರು - ಇವರನ್ನೊಳಗೊಂಡ ತನಿಖಾ ತಂಡವನ್ನು ರಚಿಸತಕ್ಕದ್ದು;

ಆ) - ರಚಿಸಲಾದ ತನಿಖಾ ತಂಡದ ಅಧಿಕಾರಿ/ನೌಕರರ ಹೆಸರುಗಳನ್ನು ತಪ್ಪದೆ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು.

ಇ) - ನಾಮನಿರ್ದೇಶಿತರಾದ ಅಧಿಕಾರಿಗಳು/ನೌಕರರು ಒಂದು ವರ್ಷದಲ್ಲಿ ಕನಿಷ್ಠ ಎರಡು ಬಾರಿ ತಮ್ಮ ಅಧಿನ ಕಛೇರಿಗಳನ್ನು ತನಿಖೆ ಮಾಡಿ ತನಿಖಾ ವರದಿಯನ್ನು ನೇರವಾಗಿ ಪರಿಶೀಲನೆಗಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಕಳುಹಿಸಿಕೊಡತಕ್ಕದ್ದು.

ಸಹಿ/-

**(ರಿನ್ ಸಾಂಗ)**

ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.